ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21** **ದಿನಾಂಕ : 22–09–2020**

# ಪತ್ರಿಕಾ ಪ್ರಕಟಣೆ

## ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿ : ಮುಖ್ಯಮಂತ್ರಿ ಯಡಿಯೂರಪ್ಪ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ) : ಪದವಿಪೂರ್ವ ಶಿಕ್ಷಣ ಇಲಾಖೆಯು 10 ತಿಂಗಳ ಅವಧಿಗೆ ಗೌರವ ಧನದ ಆಧಾರದ ಮೇಲೆ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡಿದ್ದು, ಕೋವಿಡ್ ಹಿನ್ನೆಲೆಯಲ್ಲಿ 2020 ಏಪ್ರಿಲ್ ಮಾಹೆಯಿಂದ ವೇತನ ಪಾವತಿಯಾಗದ ಕಾರಣ, 2020 ಏಪ್ರಿಲ್ ಮಾಹೆಯಿಂದ ಆಗಸ್ಟ್ ಮಾಹೆಯವರೆಗೆ ಕರ್ತವ್ಯದ ಮೇಲೆ ಎಂದು ಪರಿಗಣಿಸಿ, ವೇತನ ಪಾವತಿ ಮಾಡುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಯಡಿಯೂರಪ್ಪ ಅವರು ಇಂದು ವಿಧಾನ ಪರಿಷತ್ ಅಧಿವೇಶನದಲ್ಲಿ ತಿಳಿಸಿದರು.

ಹಾವನೂರು ಮಂಜುನಾಥ್ ಅವರು ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿಯಾಗದೆ ಆರ್ಥಿಕ ಸಂಕಷ್ಟದಲ್ಲಿದ್ದಾರೆ. ಸರ್ಕಾರ ಕೂಡಲೇ ಅವರಿಗೆ ವೇತನ ಪಾವತಿ ಮಾಡುವಂತೆ ಪ್ರಶ್ನೋತ್ತರ ವೇಳೆಯಲ್ಲಿ ಮನವಿ ಮಾಡಿದರು.

## ಹೂವು ಬೆಳೆಗಾರರಿಗೆ 1 ಎಕರೆಗೆ 25 ಸಾವಿರ ರೂ. ಪರಿಹಾರ ನೀಡಲಾಗಿದೆ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ) :

ಮಾರ್ಚ್‌ನಲ್ಲಿ ಕಾಣಿಸಿಕೊಂಡ ಕೊರೋನಾ ಮಹಾಮಾರಿಯಿಂದ ಕಷ್ಟದಲ್ಲಿ ಸಿಲುಕಿರುವ ಹೂವು ಹಾಗೂ ಹಣ್ಣು –ತರಕಾರಿ ಬೆಳೆಗಾರರಿಗೆ 1 ಎಕರೆಗೆ 25 ಸಾವಿರ ರೂ. ಪರಿಹಾರ ನೀಡಲಾಗಿದೆ ತೋಟಗಾರಿಕೆ ಮತ್ತು ಪೌರಾಡಳಿತ ಸಚಿವ ನಾರಾಯಣ ಗೌಡ ಅವರು ಉತ್ತರಿಸಿದರು.

ಶಾಸಕರಾದ ವಿ.ಆರ್.ರಮೇಶ್ ಅವರು, ಹೂವು ಬೆಳೆಗಾರರಿಗೆ ಹಾಗೂ ಹಣ್ಣು –ತರಕಾರಿ ಬೆಳೆಗಾರರಿಗೆ ಮಾರ್ಚ್‌ನಲ್ಲಿ ಕಾಣಿಸಿಕೊಂಡ ಕೊರೋನಾ ಮಹಾಮಾರಿಯಿಂದ ಅನ್ಯಾಯವಾಗಿದ್ದು, ಇವರಿಗೆ ಒದಗಿಸಿರುವ ಪರಿಹಾರದ ಬಗ್ಗೆ ಪ್ರಶ್ನೆ ಮಾಡಿದಾಗ, ತೋಟಗಾರಿಕೆ ಮತ್ತು ಪೌರಾಡಳಿತ ಸಚಿವರು ಇದಕ್ಕೆ ಉತ್ತರ ನೀಡಿದರು.

ಹಣ್ಣು ತರಕಾರಿ ಬೆಳೆಗಾರರಿಗೆ ಅನುಕೂಲವಾಗುವಂತೆ ತಾಲ್ಲೂಕು ಕೇಂದ್ರಗಳಲ್ಲಿ ಹಾಪ್‌ಕಾಮ್ಸ್ ತೆರೆದು ರೈತರಿಂದ ಖರೀದಿ ಮಾಡಲಾಗಿದೆ. ಜೊತೆಗೆ ಕೇರಳ ಮತ್ತು ಗುಜರಾತ್‌ಗೆ ಕಿಸಾನ್ ರೈಲು ಮೂಲಕ ತಲುಪಿಸಲಾಗಿದೆ ಎಂದರು.

## ಪಡಿತರ ವಿತರಣೆಯಲ್ಲಿ ಅಕ್ರಮ ಕಠಿಣ ಕ್ರಮ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ) :

ಪಡಿತರ ವಿತರಣೆಯಲ್ಲಿ ಅಕ್ರಮವೆಸಗಿದ್ದ 7 ನ್ಯಾಯ ಬೆಲೆ ಅಂಗಡಿಗಳ ಪರವಾನಗಿ ರದ್ದು ಮಾಡಲಾಗಿದೆ. 531 ಅಂಗಡಿಗಳಿಗೆ ನೋಟೀಸ್ ಜಾರಿ ಮಾಡಲಾಗಿದೆ. ಸುಮಾರು 100 ಕ್ಕೂ ಹೆಚ್ಚು ನ್ಯಾಯಬೆಲೆ ಅಂಗಡಿಗಳ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಮಾಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಸಿ.ಟಿ ರವಿ ಅವರು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಗೋಪಾಲಯ್ಯ ಅವರ ಪರವಾಗಿ ಉತ್ತರ ನೀಡಿದರು.

ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್ ಸದಸ್ಯ ಯು.ಬಿ. ವೆಂಕಟೇಶ್ ಅವರ ಪ್ರಶ್ನೆಗೆ ಆಹಾರ ಸಚಿವರ ಗೈರುನಲ್ಲಿ ಸಚಿವ ಸಿ.ಟಿ. ರವಿ ಅವರು ಸದನಕ್ಕೆ ಉತ್ತರಿಸಿದರು.

## ವಕ್ಫ್ ಮಂಡಳಿ ಸಮಿತಿ ವರದಿ 6 ತಿಂಗಳು ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ) :

ವಿಶೇಷ ಸದನ ಸಮಿತಿಯ ಅಧ್ಯಕ್ಷ ಎನ್. ರವಿಕುಮಾರ್ ಅವರು 2019-20 ನೇ ಸಾಲಿನ ಹಿಂದುಳಿದ ವರ್ಗಗಳ, ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ, ಕಾರ್ಮಿಕ, ಇಂದನ ಕಲ್ಯಾಣ ಇಲಾಖೆಯಡಿ ಬರುವ ವಕ್ಫ್ ಮಂಡಳಿಗೆ ಸಂಬಂಧಿಸಿದ ಸಮಿತಿಯ ವರದಿಗಾಗಿ ಸಮಯಾವಕಾಶವನ್ನು ಸಭಾಧ್ಯಕ್ಷರಲ್ಲಿ ಕೋರಿದ್ದು, 6 ತಿಂಗಳ ಅವಧಿಯಲ್ಲಿ ವರದಿ ನೀಡಲು ಸಮಯವನ್ನು ನೀಡಿದರು.

## ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ವಸತಿ ಸಚಿವ ವಿ. ಸೋಮಣ್ಣ ಅವರು ಸೆಪ್ಟೆಂಬರ್ 23 ಮತ್ತು 24 ರಂದು ನವ ದೆಹಲಿಗೆ ಪ್ರಯಾಣಕೈಗೊಂಡು ಸೆಪ್ಟೆಂಬರ್ 24 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಆಗಮಿಸುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದತ್ತು ಸ್ವೀಕಾರ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಮೆ : ಕುಮಾರ್ ಆರ್ಗಾನಿಕ್ ಪ್ರೊಡಕ್ಟ್, ಬೆಂಗಳೂರು ಅವರು "ಮಾನ್ಯ" ಎಂಬ ಹೆಣ್ಣು ಹುಲಿಯನ್ನು ಈಗಾಗಲೇ ದತ್ತು ಪಡೆದಿದ್ದು ಮತ್ತೊಂದು ವರ್ಷದ ಅವಧಿವರೆಗೆ 1.00 ಲಕ್ಷ ರೂ. ಪಾವತಿಸಿ ದತ್ತು ಸ್ವೀಕರಿಸಿದ್ದಾರೆ.  ಇವರು 2009ರಿಂದ ಸತತವಾಗಿ ದತ್ತು ಸ್ವೀಕರಿಸಿರುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಂತಿಮ ಪರಿಷ್ಕೃತ ಕೀ ಉತ್ತರ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):

ಕರ್ನಾಟಕ ಲೋಕಸೇವಾ ಆಯೋಗವು 2017-18 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ ಗ್ರೂಫ್ "ಎ" ಮತ್ತು "ಬಿ" ವೃಂದದ ಒಟ್ಟು 106 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ದಿನಾಂಕ 24-08-2020 ರಂದು ನಡೆಸಿದ್ದು, ಸದರಿ ಪರೀಕ್ಷೆಯ ಕೀ ಉತ್ತರಗಳನ್ನು ದಿನಾಂಕ 25-08-2020 ರಂದು ಪ್ರಕಟಿಸಲಾಗಿತ್ತು. ಸದರಿ ಕೀ ಉತ್ತರಗಳಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಸಲ್ಲಿಸಿದ್ದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಪರಿಷ್ಕೃತ ಕೀ ಉತ್ತರಗಳನ್ನು ದಿನಾಂಕ 10-9-2020 ರಂದು ಪ್ರಕಟಿಸಲಾಗಿತ್ತು.  ಸದರಿ ಪರಿಷ್ಕೃತ ಕೀ ಉತ್ತರಗಳನ್ನು ಹಿಂಪಡೆದು ಅಂತಿಮ ಪರಿಷ್ಕೃತ ಕೀ ಉತ್ತರಗಳನ್ನು ಆಯೋಗದ ವೆಬ್‌ಸೈಟ್http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ ಎಂದ ಅಧಿಕೃತ ಪ್ರಕಟಣೆ ತಿಳಿಸಿದೆ.

## ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್‌ಗೆ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):**

ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್‌ಗೆ (ಡಿ.ಸಿ.ಎಂ) ಬೆಂಗಳೂರು ನಗರ/ ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ ಮತ್ತು ರಾಮನಗರ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಂದ ಮತ್ತು ಎಲ್ಲಾ ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳಿಂದ ಹಾಗೂ ಖಾಸಗಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಪ್ರವೇಶ ಪಡೆಯುವ ಕೊನೆಯ ದಿನಾಂಕ 30-9-2020. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 400/- ಶಿಷ್ಯ ವೇತನ ನೀಡಲಾಗುವುದು ಹಾಗೂ 30 ವರ್ಷದ ಒಳಗಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 500/- ಶಿಷ್ಟಯ ವೇತನ ನೀಡಲಾಗುವುದು.

ಡಿಪ್ಲೋಮಾ ಕೋರ್ಸ್ ಪಡೆದ ಅಭ್ಯರ್ಥಿಗಳಿಗೆ ಸಹಕಾರ ಸಂಘ/ಸಂಸ್ಥೆ/ಬ್ಯಾಂಕುಗಳ ಉದ್ಯೋಗ ನೇಮಕಾತಿ ಮಾಡುವ ಸಂದರ್ಭದದಲ್ಲಿ ಪ್ರಥಮ ಆದ್ಯತೆ ನೀಡಲಾಗವುದು ಮತ್ತು ಡಿ.ಸಿ.ಎಂ. ಕೋರ್ಸಿನ ಪಠ್ಯಕ್ರಮದಲ್ಲಿ ಸಹಕಾರ ಕ್ಷೇತ್ರದ ನೇಮಕಾತಿಯ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಗೂ ಇನ್ನಿತರೆ ಹುದ್ದೆಗಳಿಗೆ ಅನುಕೂಲವಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ 080-26602046, 9902189872, 9036259781, 8550017134. ಅರ್ಜಿ ದೊರೆಯುವ ಸ್ಥಳ : ಕೆ.ಐ.ಸಿ.ಎಂ. ಸಹಕಾರ ಭವನ, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಕಟ್ಟಡ, ನಂ. 1/3, 2 ನೇ ಮಹಡಿ, 3 ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು -18 ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 2020 ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು ಹೆಚ್ಚು ಅಂಕಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :

ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (**M.H.R.D**), ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ 2020ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು **Top 20th Percentile or 80th Percentile**ಗಿಂತ ಹೆಚ್ಚು ಅಂಕಗಳಿಸಿದ ಹಾಗೂ ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ) ವಿದ್ಯಾರ್ಥಿಗಳಿಂದ **Central Sector Scheme of Scholarship for College and University Students**ಗಳಿಗೆ **online** ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ. ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿದೆ. ಆದಕಾರಣ, ಈ **portal**ನಲ್ಲಿಯೇ 2020ರ **Fresh Batch**ನ ವಿದ್ಯಾರ್ಥಿಗಳು ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. (**Link for submission of application website:www.scholarship.gov.in =» New User(Register).** ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೆ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ **"Online"** ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

2020ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು **"online"** ಮೂಲಕ ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online"** ಮೂಲಕ ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online"** ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ:31-10-2020ರೊಳಗಾಗಿ ಇಲಾಖೆಗೆ

**ಸಲ್ಲಿಸಲು( Forward ಮಾಡಲು) ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ National e-Scholarship Portalನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಆಳವಡಿಸಲಾಗುವುದು.**

**ಪದವಿ ಪೂರ್ವ ಶಿಕ್ಷಣ ಇಲಾಖೆಯ Website: http://pue.kar.nic.in =» Scholarship =» MHRD Scholarship =» MHRD Scholarship 2020–Fresh batchನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.**

## ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ : ಆನ್‌ಲೈನ್‌ನಲ್ಲಿ ಸಲ್ಲಿಸಲು ಸೂಚನೆ

**ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :**

**ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D),** ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರ ವತಿಯಿಂದ **2020**ರಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು **Top 20$^{th}$ Percentile or 80$^{th}$ Percentile**ಗಿಂತ ಹೆಚ್ಚು ಅಂಕಗಳಿಸಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ **Central Sector Scheme of Scholarship for College and University Students**ಗಳಿಗೆ **online** ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ **2020ರ Fresh Batch**ನ ವಿದ್ಯಾರ್ಥಿಗಳು ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. **(Link for submission of application website:www.scholarship.gov.in =» New User(Register).** ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಜಾರಿಯಲ್ಲಿದ್ದು, ಶೀಘ್ರದಲ್ಲಿಯೆ ಪೂರ್ಣಗೊಳ್ಳಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು ಆಗಾಗ ಈ ವೆಬ್‌ಸೈಟನ್ನು ಗಮನಿಸುತ್ತಿದ್ದು, ಪ್ರಕ್ರಿಯೆ ಆರಂಭಗೊಂಡ ಕೊಡಲೇ ಕೇಂದ್ರ

ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ **"Online"** ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

**ಹಾಗೂ 2020ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ** (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಚಿಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ.

ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ:31-10-2020ರೊಳಗಾಗಿ ಇಲಾಖೆಗೆ ಸಲ್ಲಿಸಲು( Forward ಮಾಡಲು)** ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪ್ರಸ್ತುತ **National e-Scholarship Portal**ನಲ್ಲಿ ವಿದ್ಯಾರ್ಥಿ ವೇತನದ ನಿಮಿತ್ತ ಕಾರ್ಯ ನಡೆಯುತ್ತಿರುವ ಕಾರಣ ಹೆಚ್ಚಿನ ಮಾಹಿತಿಯು ಲಭ್ಯವಿರುವುದಿಲ್ಲ. ಪ್ರಕ್ರಿಯೆ ಚಾಲನೆಗೊಂಡ ಕೂಡಲೇ ಸದರಿ ವಿದ್ಯಾರ್ಥಿ ವೇತನದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾದಲ್ಲಿ ಇಲಾಖಾ ಅಂತರ್ಜಾಲದಲ್ಲಿ ಆಳವಡಿಸಲಾಗುವುದು.

ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http://pue.kar.nic.in =» Scholarship =» MHRD Scholarship =» MHRD Scholarship 2020-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.

## 2019 ರ ಸಾಲಿನ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ

**ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :**

2019ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"**ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ಪ್ರಥಮ ನವೀಕರಣಕ್ಕೆ **"online"** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2019ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ಪ್ರಥಮ ನವೀಕರಣದ ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **"online"** ಮೂಲಕ ದಿನಾಂಕ:31–10–2020 ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2019ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ ಪ್ರಥಮ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in** =>**Scholarship=>MHRD Scholarship=> MHRD Scholarship 2019 - I RENEWAL**. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31–10–2020ರೊಳಗಾಗಿ **Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. ಪ್ರಥಮ ನವೀಕರಣ ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

## 2018 ರ ಸಾಲಿನ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನ ಆನ್‌ಲೈನ್‌ನಲ್ಲಿ ಸಲ್ಲಿಸಲು ಸೂಚನೆ

**ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :**

2018ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ದ್ವಿತೀಯ ನವೀಕರಣಕ್ಕೆ **"online"** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship**

**Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2018**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ದ್ವಿತೀಯ ನವೀಕರಣದ** ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **"online"** ಮೂಲಕ ದಿನಾಂಕ:**31–10–2020** ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2018**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ **ದ್ವಿತೀಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in** =>**Scholarship=>MHRD Scholarship=> MHRD Scholarship 2018 - II RENEWAL** ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: **31–10–2020**ರೊಳಗಾಗಿ **Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. **ದ್ವಿತೀಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

## 2017ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ವಿದ್ಯಾರ್ಥಿವೇತನ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :**

**2017ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ "Direct Benefit Transfer (DBT) Programme" ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ ತೃತೀಯ ನವೀಕರಣಕ್ಕೆ "online" ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ website:www.scholarships.gov.ನ National e-Scholarship Portalನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2017ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ತೃತೀಯ ನವೀಕರಣದ ನಿಮಿತ್ತ ಈ portal ನಲ್ಲಿಯೇ ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ "online" ಮೂಲಕ ದಿನಾಂಕ:31–10–2020 ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.**

**ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2017ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ "online" ಮೂಲಕ ತೃತೀಯ ನವೀಕರಣಕ್ಕೆ ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:http://pue.kar.nic.in =>Scholarship=>MHRD Scholarship=> MHRD Scholarship**

**2017 - III RENEWAL**. **ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31–10–2020ರೊಳಗಾಗಿ Online ಮೂಲಕ ಅರ್ಜಿಯನ್ನು ಸಲ್ಲಿಸುವುದು. ತೃತೀಯ ನವೀಕರಣ ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.**

## 2016ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ವಿದ್ಯಾರ್ಥಿವೇತನ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :**

2016ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **“Direct Benefit Transfer (DBT) Programme”** ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **ನಾಲ್ಕನೇಯ ನವೀಕರಣಕ್ಕೆ “online”** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, 2016ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ನಾಲ್ಕನೇಯ ನವೀಕರಣದ** ನಿಮಿತ್ತ ಈ **portal** ನಲ್ಲಿಯೇ ಅರ್ಜಿಗಳನ್ನು **“online”** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **“online”** ಮೂಲಕ ದಿನಾಂಕ:31–10–2020 ರೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ 2016ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **“online”** ಮೂಲಕ **ನಾಲ್ಕನೇಯ ನವೀಕರಣಕ್ಕೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.kar.nic.in =>Scholarship=>MHRD Scholarship=> MHRD Scholarship 2016 - IV RENEWAL**. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ: 31–10–2020ರೊಳಗಾಗಿ **Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. **ನಾಲ್ಕನೇಯ ನವೀಕರಣ** ಹಾಗೂ ಇನ್ನು ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

# ಸಂಪನ್ಮೂಲ ವ್ಯಕ್ತಿಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 22, (ಕರ್ನಾಟಕ ವಾರ್ತೆ) :

ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯು ರಾಜ್ಯ/ಜಿಲ್ಲೆ/ತಾಲ್ಲೂಕು ಗ್ಯಾಸೆಟಿಯರ್ ಸಂಪುಟಗಳನ್ನು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ ರಚಿಸಿ ಪ್ರಕಟಿಸುವ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. ಜಿಲ್ಲಾ ಹಾಗೂ ತಾಲ್ಲೂಕು ಗ್ಯಾಸೆಟಿಯರ್ ಸಂಪುಟಗಳಲ್ಲಿ ಪ್ರಮುಖವಾಗಿ ಇತಿಹಾಸ, ಅರ್ಥಶಾಸ್ತ್ರ, ಕನ್ನಡ, ವಾಣಿಜ್ಯ ಶಾಸ್ತ್ರ ಹಾಗೂ ರಾಜ್ಯ ಶಾಸ್ತ್ರಕ್ಕೆ ಸಂಬಂಧಿಸಿದ ಅಧ್ಯಾಯಗಳಿದ್ದು ಲೇಖಕರು ಅಧ್ಯಾಯಗಳ ರಚನಾಕಾರ್ಯ ನಿರ್ವಹಿಸಬೇಕಿರುತ್ತದೆ.

ಇಲಾಖೆಯು 2020-21 ನೇ ಸಾಲಿನಲ್ಲಿ 1) ಬೆಂಗಳೂರು ಗ್ರಾಮಾಂತರ, 2) ರಾಮನಗರ, 3)ಚಿಕ್ಕಬಳ್ಳಾಪುರ ಜಿಲ್ಲಾಗ್ಯಾಸೆಟಿಯರ್ ಗಳ ರಚನಾ ಕಾರ್ಯವನ್ನು ಹಮ್ಮಿಕೊಂಡಿದ್ದು, ಈ ಜಿಲ್ಲಾ ಗ್ಯಾಸೆಟಿಯರ್‌ಗಳ ಅಧ್ಯಾಯಗಳನ್ನು ಸಂಶೋಧನಾ ಕಾರ್ಯದಲ್ಲಿ ಆಸಕ್ತಿಯುಳ್ಳ ಸ್ನಾತಕೋತ್ತರ ಪದವಿಧರರು(ಪಿ.ಹೆಚ್‌ಡಿ) ಜೊತೆಗೆ ರಚನಾಕಾರ್ಯದಲ್ಲಿ 5 ರಿಂದ 10 ವರ್ಷಗಳ ನಿರಂತರ ಅನುಭವ ಉಳ್ಳ ಹಾಗೂ ಸ್ಥಳೀಯ ಹಿನ್ನಲೆಯುಳ್ಳ ಸಂಪನ್ಮೂಲ ವ್ಯಕ್ತಿಗಳಿಂದ ರಚಿಸಲು ಉದ್ದೇಶಿಸಿದೆ.

ಆಸಕ್ತಿಯುಳ್ಳ ಸ್ನಾತಕೋತ್ತರ ಪದವಿಧರರು(ಪಿ.ಹೆಚ್‌ಡಿ) ತಾವು ರಚಿಸಿರುವ ಪುಸ್ತಕಗಳ/ ಲೇಖನಗಳೊಂದಿಗೆ ಸ್ವವಿವರವನ್ನು ಈ ಕಚೇರಿಯ ಇ-ಮೇಲ್ ವಿಳಾಸ karnatakagazetteer@gmail.comಕ್ಕೆ 15 ದಿನಗಳೊಳಗಾಗಿ ಸಲ್ಲಿಸತಕ್ಕದ್ದು. ಸಂಪನ್ಮೂಲ ವ್ಯಕ್ತಿಗಳು ರಚಿಸಿರುವ/ಬರೆದಿರುವ ಲೇಖನಗಳು/ಪುಸ್ತಕಗಳು, ವಿಶ್ವವಿದ್ಯಾಲಯಗಳು ಪ್ರಕಟಿಸುವ ಜರ್ನಲ್ಸ್/ಪ್ರಸಾರಂಗಗಳಲ್ಲಿ ಪ್ರಕಟಿತಗೊಂಡಿರುವವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಲೇಖಕರಿಗೆ ಅಧ್ಯಾಯ ರಚನಾ ಕಾರ್ಯದಲ್ಲಿ ಸುಮಾರು 350 ರಿಂದ 400 ಪದಗಳ ಮಿತಿಗೊಳಪಟ್ಟು, ಪುಟ ಒಂದಕ್ಕೆರೂ 750/- ಗಳನ್ನು ಗೌರವ ಸಂಭಾವನೆಯಾಗಿ ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆ, ಬೆಂಗಳೂರು ಇವರ ಕಚೇರಿಯ ದೂರವಾಣಿ ಸಂಖ್ಯೆ: 080-22213474 ಮೊ: 9980853108 ಸಂಪರ್ಕಿಸಬಹುದು ಎಂದು ಮುಖ್ಯ ಸಂಪಾದಕರು, ಕರ್ನಾಟಕ ಗ್ಯಾಸೆಟಿಯರ್ ಇಲಾಖೆಯ ಪ್ರಕಟಣೆ ತಿಳಿಸಿದೆ.